ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	58
ವಿಧಾನ ಪರಿಷತ್ ಸದಸ್ಯರ ಹೆಸರು	:	ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭಾ ಕ್ಷೇತ್ರ)
ಉತ್ತರಿಸುವವರು	:	ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು
ಉತ್ತರಿಸಬೇಕಾದ ದಿನಾಂಕ	:	15.02.2022

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ;	ಕೊಡಗು ಜಿಲ್ಲೆಯಲ್ಲಿ 05.02.2022 ರವರೆಗೆ ಒಟ್ಟು 98 ಸಣ್ಣ ಉದ್ಯಮಗಳು "ಉದ್ಯಮ ರಿಜಿಸ್ಟ್ರೇಶನ್" ಪೋರ್ಟಲ್‌ನಲ್ಲಿ ನೊಂದಣಿಯಾಗಿರುತ್ತವೆ.
ಆ)	ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ವಿಫುಲ ಅವಕಾಶಗಳಿದ್ದು, ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ ನೀಡಲು ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕೈಗೊಂಡಿರುವ ಕ್ರಮಗಳೇನು;	ಕರ್ನಾಟಕ ಸರ್ಕಾರವು ಕೊಡಗು ಜಿಲ್ಲೆಯು ಸೇರಿದಂತೆ ಎಲ್ಲಾ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ ನೀಡಲು ರೂಪಿಸಿರುವ ಯೋಜನೆಗಳು ಮತ್ತು ಕೈಗೊಂಡಿರುವ ಕ್ರಮಗಳು ಈ ಕೆಳಗಿನಂತಿರುತ್ತವೆ. 1. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ. 25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ. 2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು. 3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ 75 ರಷ್ಟು ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. 4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ. 60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. 5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು

		ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.5.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ)ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಠ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ. 6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ. 1. ಮುದ್ರಾಂಕ ಶುಲ್ಕ ವಿನಾಯಿತಿ 2. ನೋಂದಣಿ ಶುಲ್ಕ ರಿಯಾಯಿತಿ. 3. ಬಂಡವಾಳ ಹೂಡಿಕೆ ಸಹಾಯಧನ 4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ 5. ಭೂ ಪರಿವರ್ತನಾ ಶುಲ್ಕ ಮರುಪಾವತಿ. 6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ. 7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ. 8. ವಿದ್ಯುತ್ ತೆರಿಗೆ ವಿನಾಯಿತಿ 9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ 10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ 11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ ಈ ಯೋಜನೆಗಳನ್ನು ಎಲ್ಲಾ ಕೈಗಾರಿಕಾ ಸಂಘ ಸಂಸ್ಥೆಗಳ ಸದಸ್ಯರುಗಳಿಗೆ ನಿರುದ್ಯೋಗಿ ಯುವಕ ಯುವತಿಯರಿಗೆ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಿ ಸದ್ಬಳಕೆ ಮಾಡಿಕೊಳ್ಳಲು ತಿಳಿಸಲಾಗುತ್ತಿದೆ.
ಇ)	ಜಿಲ್ಲೆಯಲ್ಲಿ ಸ್ಥಳೀಯವಾಗಿ ಲಭ್ಯವಾಗುವ ಕಚ್ಚಾ ವಸ್ತುಗಳ ಸದ್ಬಳಕೆ ಮಾಡಿಕೊಂಡು ಜಿಲ್ಲೆಯ ಯುವಜನರಿಗೆ ಸಾಕಷ್ಟು ಉದ್ಯೋಗ ದೊರೆಯುವಂತೆ ಮಾಡಲು ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ?	ಜಿಲ್ಲೆಯಲ್ಲಿ ಸ್ಥಳೀಯವಾಗಿ ಲಭ್ಯವಾಗುವ ನೈಸರ್ಗಿಕ ಸಂಪನ್ಮೂಲಗಳು ಮತ್ತು ಕಚ್ಚಾ ವಸ್ತುಗಳನ್ನು ಆಧರಿಸಿ ಜಿಲ್ಲಾ ಮಟ್ಟದಲ್ಲಿ District Perspective Plan ನ್ನು ಸಿದ್ಧಪಡಿಸಲಾಗುತ್ತದೆ. ಇದರಲ್ಲಿ ಜಿಲ್ಲೆಯಲ್ಲಿ ಸ್ಥಾಪಿಸಬಹುದಾದ ಸೂಕ್ಷ್ಮ,ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಕುರಿತು ಮಾಹಿತಿಯನ್ನು ಉದ್ಯಮಶೀಲರಿಗೆ ಉದ್ಯಮಶೀಲತಾ ಜಾಗೃತಿ ಕಾರ್ಯಕ್ರಮ ಮತ್ತು ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮಗಳಲ್ಲಿ ನೀಡಲಾಗುತ್ತದೆ. ಹೀಗೆ ಜಿಲ್ಲೆಯಲ್ಲಿ ಸ್ಥಳೀಯವಾಗಿ ಲಭ್ಯವಾಗುವ ಕಚ್ಚಾವಸ್ತುಗಳ ಸದ್ಬಳಕೆ ಮಾಡಿಕೊಂಡು ಜಿಲ್ಲೆಯ ಯುವಜನರಿಗೆ ಸಾಕಷ್ಟು ಉದ್ಯೋಗ ದೊರೆಯುವಂತೆ ಮಾಡಲು ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರ ಕ್ರಮ ವಹಿಸಿರುತ್ತದೆ.

ಸಿಐ 20 ಎಸ್‌ಎಸ್‌ಐ 2022

(ಎನ್.ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು